**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ ನರಸೀಪುರ**

<u>ಸಿ ಸಿ ಸಂಖ್ಯೆ **536/2023**</u>

**<u>ದೋಷಾರೋಪಣೆ</u>**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ ನರಸೀಪುರ ಆದ ನಾನು

ರಾಜೇಶ ಬಿನ್ ಲೇ ರಂಗಯ್ಯ
28 ವರ್ಷ, ವಾಸಃ ಆಲಗೂಡು ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಏನೆಂದರೆ :-

ಮೊದಲನೆಯದಾಗಿ, ದಿನಾಂಕ 27.10.2023 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ, ತಿ ನರಸೀಪುರ ಪೋಲಿಸ್ ಠಾಣಾ ಸರಹದ್ದಿಗೆ ಸೇರಿದ, ತಿ ನರಸೀಪುರ ತಾಲ್ಲೂಕಿನ ಆಲಗೂಡು ಗ್ರಾಮದ ಬಸ್ ನಿಲ್ದಾಣದ ಬಳಿ ಹೋಟೆಲ್ ಪಕ್ಕ ಇರುವ ಗೋಪಾಲ ರವರ ಕೋಳಿ ಅಂಗಡಿ ಮುಂಭಾಗ, ಆರೋಪಿಯಾದ ನೀವು ಚಾಸಾ-1/ದೇವರಸ ನಾಯಕ ರವರ ಜೊತೆ ಬೀಡಿ ವಿಚಾರಕ್ಕೆ ಜಗಳ ತೆಗೆದು, ಅವರನ್ನು ಉದ್ದೇಶಿಸಿ, "ಬೋಳಿ ಮಗನೇ ಸೂಳೇ ಮಗನೇ" ಎಂಬ ಅವ್ಯಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಸಿಮೆಂಟ್ ಪಾರ್ಕಿಂಗ್ ಟೈಲ್ಸ್ ನಿಂದ ಚಾಸಾ-1 ರವರ ತಲೆಯ ಮುಂಭಾಗ ಮತ್ತು ಹಿಂಭಾಗಕ್ಕೆ ಹೊಡೆದು ತೀವ್ರ ಸ್ವರೂಪದ ಗಾಯ ಪಡಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 326 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

**ದಿನಾಂಕಃ 29.11.2024**

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.**

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ,

ತಿ ನರಸೀಪುರ

ಸಿ ಸಿ ಸಂಖ್ಯೆ: **536/2023**

**ದೋಷಾರೋಪಣೆ**

ರಾಜೇಶ ಬಿನ್ ಲೇ ರಂಗಯ್ಯ
28 ವರ್ಷ, ವಾಸಃ ಆಲಗೂಡು ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ದ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

**ದಿನಾಂಕಃ 29.11.2024**

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.**